ಸಾಕ್ಷಿದಾರನನ್ನು ಕರೆಸಿ ಪ್ರಮಾಣೀಕರಿಸಲಾಯಿತು. ಪ್ರ.ಮಾ.ದಿಃ 18-09-2021.

**ಮುಂದುವರಿದ ಮುಖ್ಯ ವಿಚಾರಣೆ - ವಾದಿ ಪರಃ ಶ್ರೀ ಎಫ್. ಬಿ. ಎಂ. ವಕೀಲರಿಂದಃ**

ದಾವೆಗೆ ಸಂಬಂಧಿಸಿದಂತೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ಅವುಗಳನ್ನು ನೋಡಿದರೆ ಗುರುತಿಸುತ್ತೇನೆ.

ದಾವಾ ಆಸ್ತಿಗೆ ಸಂಬಂದಪಟ್ಟಂತೆ ಪಹಣಿ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-1 ಎಂದು, ದಿಃ 14.03.2007 ರಂದು 2 ನೇ ಪ್ರತಿವಾದಿಯು 8 ನೇ ಪ್ರತಿವಾದಿಯವರಿಗೆ ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಬರೆದುಕೊಟ್ಟ ಖರೀದಿ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ -2 ಎಂದು, ದಿಃ 22-06-2003 ರಂದು 1 ನೇ ಪ್ರತಿವಾದಿಯಿಂದ ದಾವಾ ಆಸ್ತಿಯನ್ನು ಖರೀದಿ ಮಾಡಿದ ಬಗ್ಗೆ ಖರೀದಿ ಪತ್ರದ ದೃಢೀಕರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ದಾವಾ ಆಸ್ತಿಗೆ ಸಂಬಂದಪಟ್ಟಂತೆ ಒಂದು ಗಣಕೀಕೃತ ಪಹಣಿ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-4 ಎಂದು, ದಾವಾ ಆಸ್ತಿಗಳಿಗೆ ಸಂಬಂದಪಟ್ಟಂತೆ ದಿಃ 04-09-2018 ರಂದು ಪಿಡಿಓ, ಗಾಮ ಪಂಚಾಯತ ಇವರು ನೀಡಿದ ದೃಢೀಕರಣ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-5 ರಿಂದ 8 ಎಂದು ಗುರುತಿಸಲಾಯಿತು.

ಆದ್ದರಿಂದ ವಾದಿಯ ದಾವೆಯಲ್ಲಿ ಕೋರಿದಂತೆ ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲು - ಪ್ರತಿವಾದಿ ಪರ ವಕೀಲರಿಂದ.**

ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಅದೆ.

ಸಹಿ/-
ದಿವಾಣಿ ನ್ಯಾಯಾಧೀಶರು,
ಬ್ಯಾಡಗಿ.